**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: M/s Faya Renewables and Power Projects Private Limited ಕಂಪನಿಗೆ ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ್ ಮತ್ತು ಎರ್ನಾಳ್ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಹಂಚಿಕೆ ಆದೇಶ ನೀಡುವ ಬಗ್ಗೆ.

ಓದಲಾಗಿದೆ:
1 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:KRED/08/FRAPPPL-10 MW/Nandihal/Bijapur/2015/F-1255
2 ದಿನಾಂಕ:10.12.2015 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಪತ್ರ ಸಂಖ್ಯೆ: KRED/08/FRAPPPL-10 MW/Nandihal/Bijapura/2016/1166

* * *

ಪ್ರಸ್ತಾವನೆ :-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಏಕ ಕಡತ ಪದ್ದತಿಯಡಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Faya Renewables and Power Projects Private Limited ಕಂಪನಿಯವರು ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ್ ಮತ್ತು ಎರ್ನಾಳ್ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಇದನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಂತೆ ದಿನಾಂಕ: 10.12.2015 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ M/s Faya Renewables and Power Projects Private Limited ಕಂಪನಿಯು ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ್ ಮತ್ತು ಎರ್ನಾಳ್ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಘಟಕ ಸ್ಥಾಪಿಸಲು 2 ವರ್ಷಗಳಲ್ಲಿ ವಾಸ್ತವಿಕ ಸಾಮರ್ಥ್ಯಕ್ಕೆ ವಿಸ್ತೃತ ಯೋಜನಾ ವರದಿ (DPR) ಯನ್ನು ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವ ಷರತ್ತಿಗೊಳಪಟ್ಟು ತತ್ವಶಃ ಅನುಮೋದನೆ ನೀಡಲು ಸಮಿತಿಯು ಶಿಫಾರಸ್ಸು ಮಾಡಿರುತ್ತದೆ.

ಈ ಮಧ್ಯೆ, ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರು M/s Faya Renewables and Power Projects Private Limited ಕಂಪನಿಯವರಿಗೆ ದಿನಾಂಕ:10.12.2015 ರಂದು ನಡೆದ

ಹಂಚಿಕೆ ಸಮಿತಿ ಸಭೆಯಲ್ಲಿ ಶಿಫಾರಸ್ಸುಗೊಂಡಂತೆ, ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ್ ಮತ್ತು ಎರ್ನಾಳ್ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ವಿಸ್ತೃತ ಯೋಜನಾ ವರದಿ (DPR) ಯನ್ನು ತಯಾರಿಸಿ, ನಿಗಧಿತ ಡಿಪಿಆರ್ ಶುಲ್ಕದೊಂದಿಗೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಿರುವುದರಿಂದ, ಸದರಿ ಕಂಪನಿಗೆ ತತ್ವಶಃ ಅನುಮೋದನೆಯ ಬದಲು ಹಂಚಿಕೆಯ ಆದೇಶವನ್ನು ನೀಡಬೇಕೆಂದು ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 278 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ : 09.11.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಸರ್ಕಾರವು, M/s Faya Renewables and Power Projects Private Limited ಕಂಪನಿಯು ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿ ತಾಲ್ಲೂಕಿನ ನಂದಿಹಾಳ್ ಮತ್ತು ಎರ್ನಾಳ್ ಗ್ರಾಮಗಳಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಈ ಕೆಳಕಂಡಂತೆ ನಮೂದಿಸಿರುವ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು **ಹಂಚಿಕೆ** ಮಾಡಿ ಆದೇಶಿಸಲಾಗಿದೆ.

Geographical area description for 10 MW capacity wind power project

| Sl. No. | Toposheet No. | Proposed capacity in MW | Near by villages of the proposed area and district. | Geographical area description of the project |
|---|---|---|---|---|
| 1 | 47 P/14 | 10 MW<br>(5 Nos x 2.0 MW) | Nandihal and Yarnal Villages of Basavanabagewadi Taluk, Bijapur District. | The proposed area is a ground level plain and has presence of cross roads and National Highway 13. Area does not have significant peaks and mostly it is a private land and h agriculture activities. The average elevation of the area varies from 590M to 615Mtrs. The area is held in the following Geographical co-ordinates as:<br>Latitude: 16°36'49" - 16°38'5.2"N<br>Longitude: 75°50'0" - 75°53'38"E<br>Peaks: 594, 590, 606, 612 and 615m Amsl |
| | Total | 10 MW | | |

ಷರತ್ತುಗಳು / ನಿಬಂಧನೆಗಳು:-

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ : 06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

-3)

2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ, ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು ಮತ್ತು ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಆಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು ಹಾಗೂ ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಲಾಗಿದೆ.

7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ದಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಯಾವುದೇ ರೀತಿಯ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಂದಾಯ ಮಾಡತಕ್ಕದ್ದು.

10. ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಅನ್ವಯವಾಗುತ್ತವೆ.

--4)